ಜಿಲ್ಲಾಧಿಕಾರಿಗಳ ಕಾರ್ಯಾಲಯ, ಉತ್ತರ ಕನ್ನಡ, ಕಾರವಾರ – 581 301
OFFICE OF THE DEPUTY COMMISSIONER, UTTARA KANNADA DISTRICT, KARWAR, -581 301
ದೂರವಾಣಿ : 08382 226406, 226471 Email: dckarwar@gmail.com
Telephone: 08382 226603 (Fax) Website: http://uttara kannada.nic.in

**ಪರಿಶೀಲನಾ ಸಮಯದಲ್ಲಿ ಅಭ್ಯರ್ಥಿಗಳು ಹಾಜರಪಡಿಸಬೇಕಾದ ದಾಖಲೆಗಳು ಈ ಕೆಳಗಿನಂತಿವೆ.**

1. ಇತ್ತೀಚಿನ 2 ಪಾಸಪೋರ್ಟ ಅಳತೆಯ ಭಾವಚಿತ್ರಗಳು
2. ದ್ವಿತೀಯ ಪಿ.ಯು.ಸಿ ಮೂಲ ಅಂಕಪಟ್ಟಿ. (ನೇಮಕಾತಿ ಅಧಿಸೂಚನೆಯಲ್ಲಿ ತಿಳಿಸಿರುವಂತೆ)
3. ವಯಸ್ಸಿನ ಬಗ್ಗೆ ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ ಅಂಕಪಟ್ಟಿ ಅಥವಾ ಜನನ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗಾಗಿ ಹಾಜರಪಡಿಸಬೇಕು.
4. ಮೀಸಲಾತಿಯಡಿ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳು ಚಾಲ್ತಿಯಲ್ಲಿರುವ ನಿಗದಿತ ನಮೂನೆಯಲ್ಲಿ ಸಕ್ಷಮ ಪ್ರಾಧಿಕಾರದಿಂದ ಪಡೆದ ಮೂಲ ಪ್ರಮಾಣ ಪತ್ರ. ಹಾಜರಪಡಿಸಬೇಕು.
5. ಗ್ರಾಮೀಣ ಮೀಸಲಾತಿ ಹಾಗೂ ಕನ್ನಡ ಮಾಧ್ಯಮ ಮೀಸಲಾತಿ ಕೋರಿರುವ ಅಭ್ಯರ್ಥಿಗಳು ಸಕ್ಷಮ ಪ್ರಾಧಿಕಾರದಿಂದ ಪಡೆದ ಮೂಲ ಪ್ರಮಾಣ ಪತ್ರಗಳನ್ನು ಹಾಜರಪಡಿಸಬೇಕು.
6. ಅಂಗವಿಕಲ ಮೀಸಲಾತಿ ಕೋರಿರುವ ಅಭ್ಯರ್ಥಿಗಳು ನಿಗದಿ ಪಡಿಸಿದ ನಮೂನೆಯಲ್ಲಿ ಸಕ್ಷಮ ಪ್ರಾಧಿಕಾರದಿಂದ ಪಡೆದ ಮೂಲ ಅಂಗವಿಕಲ ಪ್ರಮಾಣ ಪತ್ರ ಹಾಜರುಪಡಿಸಬೇಕು.
7. ತೃತೀಯ ಲಿಂಗ ಮೀಸಲಾತಿ ಕೋರಿರುವ ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ ಸಕ್ಷಮ ಪ್ರಾಧಿಕಾರದಿಂದ ಪಡೆದ ಮೂಲ ಪ್ರಮಾಣ ಪತ್ರ ಹಾಜರಪಡಿಸಬೇಕು.
8. ಮಾಜಿ ಸೈನಿಕರ ಮೀಸಲಾತಿಯಡಿ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳು ಸೈನಿಕ ಸೇವೆಯಲ್ಲಿ ಬಿಡುಗಡೆಯಾದ/ ಮುಕ್ತಿಹೊಂದಿದ ಬಗೆಗಿನ ಪ್ರಮಾಣ ಪತ್ರ ಹಾಜರಪಡಿಸಬೇಕು.
9. ಯೋಜನಾ ನಿರಾಶ್ರಿತ ಮೀಸಲಾತಿಯಡಿ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ ಸಕ್ಷಮ ಪ್ರಾಧಿಕಾರದಿಂದ ಪಡೆದ ಮೂಲ ಪ್ರಮಾಣ ಪತ್ರ ಹಾಜರಪಡಿಸಬೇಕು.
10. ಸರಕಾರಿ ಸೇವೆಯಲ್ಲಿ ಇರುವವರು (ರಾಜ್ಯ/ಕೇಂದ್ರ) ಸಂಬಂಧಪಟ್ಟ ಇಲಾಖೆಯ ಸಕ್ಷಮ ಪ್ರಾಧಿಕಾರದಿಂದ ಪಡೆದ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಹಾಜರಪಡಿಸಬೇಕು.
11. ವಿಧವಾ ಅಭ್ಯರ್ಥಿಯಾದಲ್ಲಿ ಸಕ್ಷಮ ಪ್ರಾಧಿಕಾರದಿಂದ ಪಡೆದ ಮೂಲ ಪ್ರಮಾಣ ಪತ್ರ ಹಾಜರಪಡಿಸಬೇಕು.
12. ಜನಗಣತಿ ಕಾರ್ಯದಲ್ಲಿ ಕೆಲಸ ನಿರ್ವಹಿಸಿದ ಅಭ್ಯರ್ಥಿಗಳು ವಯಸ್ಸಿನ ಸಡಿಲಿಕೆ ಬಯಸಿದಲ್ಲಿ ಸಕ್ಷಮ ಪ್ರಾಧಿಕಾರದಿಂದ ಪಡೆದ ಮೂಲ ಪ್ರಮಾಣ ಪತ್ರ ಹಾಜರಪಡಿಸಬೇಕು.
13. ಜೀತಮುಕ್ತಿ ಹೊಂದಿದ ಅಭ್ಯರ್ಥಿ ವಯಸ್ಸಿನ ಸಡಲಿಕೆ ಬಯಸಿದಲ್ಲಿ ಸಕ್ಷಮ ಪ್ರಾಧಿಕಾರದಿಂದ ಪಡೆದ ಮೂಲ ಪ್ರಮಾಣ ಪತ್ರ ಹಾಜಪಡಿಸಬೇಕು.

14 ಆನ್‌ಲೈನ್‌ನಲ್ಲಿ ಅರ್ಜಿಸಲ್ಲಿಸಿದ ಬಗ್ಗೆ Acknowledgement ಹಾಗೂ ಅರ್ಜಿ ಶುಲ್ಕ ಪಾವತಿಸಿದ ಬಗ್ಗೆ ಬ್ಯಾಂಕ್ ಚಲನ್ ಪ್ರತಿ/ಆನ್ ಲೈನ್ ನಿಂದ ಪಡೆದ ಚಲನ ಪ್ರತಿಯನ್ನು ಹಾಜರಪಡಿಸಬೇಕು.

15. ಅಭ್ಯರ್ಥಿಗಳು ಈ ಮೇಲ್ಕಾಣಿಸಿದ ದಾಖಲೆಗಳ ಪೈಕಿ ತಮಗೆ ಅನ್ವಯಿಸುವ ದಾಖಲೆಗಳ ಮೂಲ ಪ್ರತಿ ಹಾಗೂ ಅವುಗಳ ಒಂದು ದೃಢೀಕೃತ ಪ್ರತಿಯನ್ನು ಪರಿಶೀಲನಾ ಸಂದರ್ಭದಲ್ಲಿ ಹಾಜರುಪಡಿಸಬೇಕು. ಸದ್ರಿ ದಾಖಲೆಗಳು 10-05-2022 ರ ಪೂರ್ವದಲ್ಲಿ ಪಡೆದಿರಬೇಕು.

ಜಿಲ್ಲಾಧಿಕಾರಿ ಹಾಗೂ ಅಧ್ಯಕ್ಷರು,
ಗ್ರಾಮಲೆಕ್ಕಿಗರ ನೇರ ನೇಮಕಾತಿ ಪ್ರಾಧಿಕಾರ
ಉತ್ತರ ಕನ್ನಡ ಜಿಲ್ಲೆ ಕಾರವಾರ